# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **1218 (1091)** |
| **ಸದಸ್ಯರ ಹೆಸರು** | : | **ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ)** |
| **ಉತ್ತರಿಸುವ ದಿನಾಂಕ** | : | **13-03-2026** |
| **ಉತ್ತರಿಸುವ ಸಚಿವರು** | : | **ಕಾರ್ಮಿಕ ಸಚಿವರು** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಇತ್ತೀಚಿನ ಅವಧಿಯಲ್ಲಿ ಕಾರ್ಮಿಕ ಕೆಲಸದ ಸ್ಥಳದಲ್ಲಿ ಎಷ್ಟು ಅಪಘಾತಗಳು ಮತ್ತು ಸಾವುನೋವುಗಳು ವರದಿಯಾಗಿವೆ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಕೆಲಸದ ಸ್ಥಳದಲ್ಲಿ ಅಪಘಾತ ಉಂಟಾದ ನಂತರ ಪರಿಹಾರ ಕೋರಿ ಅರ್ಜಿಗಳು ಸ್ವೀಕೃತವಾಗಿವೆ. ಕಳೆದ 02 ವರ್ಷಗಳಲ್ಲಿ ಕೆಲಸದ ಸ್ಥಳದಲ್ಲಿ ಅಪಘಾತ ಉಂಟಾದ 75 ಪ್ರಕರಣಗಳು ವರದಿಯಾಗಿರುತ್ತವೆ.<br><br>ಕಾರ್ಖಾನೆಗಳ ಕಾಯ್ದೆ 1948 ರಡಿಯಲ್ಲಿ ನೋಂದಾಯಿತ ಕಾರ್ಖಾನೆಗಳಲ್ಲಿ ಹಾಗೂ ರೂ.25.00 ಕೋಟಿಗೂ ಮೀರಿದ ಕಟ್ಟಡ ಮತ್ತು ಇತರ ನಿರ್ಮಾಣ ಕಾಮಗಾರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಇತ್ತೀಚಿನ ಅವಧಿಯಲ್ಲಿ (ಜನವರಿ 2025 ರಿಂದ ಫೆಬ್ರುವರಿ 2026ರವರೆಗೆ) ಸಂಭವಿಸಿರುವ ಅಪಘಾತಗಳು ಮತ್ತು ಸಾವು ನೋವುಗಳ ಅಂಕಿ ಅಂಶಗಳು ಈ ಮುಂದಿನಂತಿದೆ. |

| ವಿವರ | ಅಪಘಾತಗಳ ಸಂಖ್ಯೆ | ಸಾವು ನೋವುಗಳ ಸಂಖ್ಯೆ |
|---|---|---|
| ಕಾರ್ಖಾನೆಗಳ ಕಾಯ್ದೆ 1948 ರಡಿಯಲ್ಲಿ ನೋಂದಾಯಿತ ಕಾರ್ಖಾನೆಗಳಲ್ಲಿ | 60 | 78 |
| ರೂ. 25.00 ಕೋಟಿಗೂ ಮೀರಿದ ಕಟ್ಟಡ ಮತ್ತು ಇತರ ನಿರ್ಮಾಣ ಕಾಮಗಾರಿಗಳಲ್ಲಿ | 11 | 14 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ | ನಿರ್ಮಾಣ ಸ್ಥಳಗಳು ಮತ್ತು ಕಾರ್ಖಾನೆಗಳಲ್ಲಿ ಸುರಕ್ಷತಾ ನಿಯಮಗಳನ್ನು ಪದೇ ಪದೇ ಉಲ್ಲಂಘಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನಿರ್ಮಾಣ ಸ್ಥಳಗಳು ಮತ್ತು ಕಾರ್ಖಾನೆಗಳಲ್ಲಿ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಇಲಾಖಾವತಿಯಿಂದ ನಿಯತಕಾಲಿಕವಾಗಿ ಪರಿವೀಕ್ಷಣೆಗಳನ್ನು ನಡೆಸಿ, ಗಮನಿಸಲಾದ ಉಲ್ಲಂಘನೆಗಳಿಗೆ ನಿಯಮಾನುಸಾರ ಕಾನೂನು ಕ್ರಮ ವಹಿಸಲಾಗುತ್ತಿದೆ. |
| ಇ | ಗಾಯಗೊಂಡ ಕಾರ್ಮಿಕರು ಅಥವಾ ಮೃತ ಕಾರ್ಮಿಕರ ಕುಟುಂಬಗಳಿಗೆ ಯಾವ ಪರಿಹಾರವನ್ನು ನೀಡಲಾಗಿದೆ: (ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಕೆಲಸದ ಸ್ಥಳದಲ್ಲಿ ಅಪಘಾತ ಉಂಟಾದಾಗ ಗಾಯಗೊಂಡ ಕಾರ್ಮಿಕರು ಅಥವಾ ಮೃತ ಕಾರ್ಮಿಕರ ಕುಟುಂಬಗಳಿಗೆ ಈ ಕೆಳಕಂಡಂತೆ ಪರಿಹಾರ ನೀಡಲಾಗಿರುತ್ತದೆ. |

| ಕ್ರ. ಸಂ | ಅಪಘಾತ ವಿವರ | ಫಲಾನುಭವಿಗಳ ಸಂಖ್ಯೆ | ನೀಡಿರುವ ಪರಿಹಾರದ ಮೊತ್ತ |
|---|---|---|---|
| 01 | ಅಪಘಾತ ದಿಂದ ಮರಣ | 72 | 1,44,32000/- |
| 02 | ಅಪಘಾತ ದಿಂದ ಗಾಯಗೊಂಡವರು | 03 | 4,60,000/- |

**ಈ** ಕೆಲಸದ ಸ್ಥಳಗಳಲ್ಲಿ ಮಹಿಳಾ ಕಾರ್ಮಿಕರ ಸುರಕ್ಷತೆಯ ಪ್ರಸ್ತುತ ಸ್ಥಿತಿ ಏನು;

ಉದ್ಯೋಗ ಸ್ಥಳಗಳಲ್ಲಿ ಮಹಿಳೆಯರ ಸುರಕ್ಷತೆಗೆ ಹೆಚ್ಚಿನ ಆಧ್ಯತೆಯನ್ನು ನೀಡಲಾಗುತ್ತಿದೆ. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅನ್ನು ದಿನಾಂಕ: 09-12-2023 ರಂದು ಜಾರಿಗೆ ತರಲಾಗಿದೆ. ಮಹಿಳೆಯರಿಗೆ ಕೆಲಸದ ಸ್ಥಳದಲ್ಲಿ ಸುರಕ್ಷಿತ ವಾತಾವರಣವನ್ನು ಕಲ್ಪಿಸುವುದೇ ಈ ಕಾಯ್ದೆಯ ಮುಖ್ಯ ಉದ್ದೇಶವಾಗಿದೆ.

ಯಾವುದೇ ಕಛೇರಿ ಅಥವಾ ಸಂಸ್ಥೆಯ ಕೆಲಸದ ಸ್ಥಳಗಳಲ್ಲಿ ಮಹಿಳಾ ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದರೆ ಕೆಲಸದ ಸ್ಥಳಗಳಲ್ಲಿ ಆಂತರಿಕ ದೂರು ನಿವಾರಣಾ ಸಮಿತಿಯನ್ನು ಕಡ್ಡಾಯವಾಗಿ ರಚನೆಯನ್ನು ಮಾಡಬೇಕಾಗಿದೆ. ಮಹಿಳೆಯರು ತಮ್ಮ ಕೆಲಸದ ಸ್ಥಳದಲ್ಲಿ ಯಾವುದೇ ರೀತಿಯ ಕಿರುಕುಳ ಅಥವಾ ಅಸುರಕ್ಷತೆಯನ್ನು ಎದುರಿಸಿದಾಗ ಕಂಪನಿಯ ಆಂತರಿಕ ಸಮಿತಿಗೆ ದೂರು ನೀಡಬಹುದಾಗಿದೆ. ಇಲಾಖಾವತಿಯಿಂದ ನಿಯತಕಾಲಿಕವಾಗಿ ಪರಿವೀಕ್ಷಣೆಗಳನ್ನು ನಡೆಸಿ ಸುರಕ್ಷತೆಯ ಕುರಿತು ಪರಿಶೀಲಿಸಲಾಗುತ್ತಿದೆ.

**ಉ** ಇತ್ತೀಚೆಗೆ ಎಷ್ಟು ಬಾಲ ಕಾರ್ಮಿಕರ ಪ್ರಕರಣಗಳನ್ನು ಪತ್ತೆ ಹಚ್ಚಿ ರಕ್ಷಿಸಲಾಗಿದೆ ಹಾಗೂ ರಕ್ಷಿಸಲ್ಪಟ್ಟ ಮಕ್ಕಳು ಮತ್ತು ಪೀಡಿತ ಕುಟುಂಬಗಳಿಗೆ ಪುನರ್ವಸತಿ ಕ್ರಮಗಳನ್ನು ಜಾರಿ ಮಾಡಲಾಗುತ್ತಿದೆಯೇ? (ಮಾಹಿತಿ ನೀಡುವುದು)

ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರಡಿ ಕಳೆದ ಮೂರು ವರ್ಷ (2023, 2024, 2025 ಹಾಗೂ 2026 ಜನವರಿ ಅಂತ್ಯಕ್ಕೆ) ರಕ್ಷಿಸಲಾದ ಬಾಲ ಹಾಗೂ ಕಿಶೋರ ಕಾರ್ಮಿಕರ ವಿವರಗಳು ಈ ಕೆಳಕಂಡಂತಿರುತ್ತವೆ

| ಕ್ರ ಸಂ | ವರ್ಷ | ತಪಾಸಣೆಗಳ ಸಂಖ್ಯೆ | ರಕ್ಷಿಸಲಾದ ಬಾಲ ಹಾಗೂ ಕಿಶೋರ ಕಾರ್ಮಿಕರ ಸಂಖ್ಯೆ | ಪತ್ತೆಯಾದ ಬಾಲ ಹಾಗೂ ಕಿಶೋರ ಕಾರ್ಮಿಕರ ಪ್ರಕರಣಗಳ ಸಂಖ್ಯೆ |
|---|---|---|---|---|
| 1 | 2023 | 39001 | 707 | 414 |
| 2 | 2024 | 41652 | 781 | 556 |
| 3 | 2025 | 38251 | 679 | 465 |
| 4 | 2026 (Feb) | 7379 | 126 | 100 |
| ಒಟ್ಟು | | 126283 | 2293 | 1535 |

ತಪಾಸಣೆಗಳಲ್ಲಿ / ದಾಳಿಗಳಲ್ಲಿ ಪತ್ತೆಯಾದ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿ (Child Welfre Committee)ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯ ವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಣವಾಗಿ ದಾಖಲು ಮಾಡಲು ಕ್ರಮ ಕೈಗೊಳ್ಳುವುದು ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ,

| | | |
|---|---|---|
| | | ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ / ಅಟಲ್ ಬಿಹಾರಿ ವಾಜಪೇಯಿ / ಶ್ರೀಮತಿ ಇಂದಿರಾಗಾಂಧಿ/ ಡಾ\|\| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಮತ್ತು ಶ್ರೀ ನಾರಾಯಣ ಗುರು ಶಾಲೆಗಳಿಗೆ ವಿಶೇಷ ವರ್ಗಗಳ ಅಭ್ಯರ್ಥಿಗಳನ್ನು ಪ್ರವೇಶ ಪರೀಕ್ಷೆ ಇಲ್ಲದೆ ನೇರವಾಗಿ ದಾಖಲಾತಿ ಮಾಡಿ ಪುರ್ವಸತಿಗೊಳಿಸಿ ಅವರ ಶಿಕ್ಷಣ ಮುಂದುವರಿಕೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಈ ಕುರಿತು ಪೀಡಿತ ಕುಟುಂಬಗಳಿಗೆ ಯಾವುದೇ ಪುನರ್ವಸತಿ ಕ್ರಮಗಳು ಇರುವುದಿಲ್ಲ. |

**ಕಡತ ಸಂಖ್ಯೆ: ಕಾಇ 21 ಕಾಬಾನಿ 2026**

**(ಸಂತೋಷ್ ಎಸ್.ಲಾಡ್),**
**ಕಾರ್ಮಿಕ ಸಚಿವರು**